ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/10/ಸುತ್ತೋಲೆ/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-560001,
ದಿನಾಂಕ:08.07.2021

**ಸುತ್ತೋಲೆ**

**ವಿಷಯ:** ಕಾಲೇಜು ಶಿಕ್ಷಣ ಇಲಾಖೆಯ "ವಿಜಯೀಭವ" ಯೂಟ್ಯೂಬ್ ಚಾನಲ್ ಮುಖಾಂತರ "Physical Fitness for All" ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಬಗ್ಗೆ.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೋವಿಡ್-19 ಸಂದರ್ಭದಲ್ಲಿ ದೈಹಿಕ ಕ್ಷಮತೆ ಕಾಪಾಡುವುದು ಬಹಳ ಮುಖ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ದಿನಾಂಕ: 21.06.2021 ರಿಂದ ಪ್ರತಿದಿನ ಬೆಳಗ್ಗೆ 6.30 ರಿಂದ 7.30 ರವರೆಗೆ 100 ದಿನಗಳ ಕಾಲ ಇಲಾಖೆಯ "ವಿಜಯೀಭವ" ಯೂಟ್ಯೂಬ್ ಚಾನಲ್ Youtube / Vijayibhava ಮುಖಾಂತರ ಯೋಗ, ದೈಹಿಕ ಶಿಕ್ಷಣ, ಪ್ರಾಣಯಾಮ, ದೈಹಿಕ ದೃಡತೆ, ಇವುಗಳ ಬಗ್ಗೆ ಪ್ರಾಯೋಗಿಕ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಸದರಿ ಕಾರ್ಯಕ್ರಮದಲ್ಲಿ ಇಲಾಖಾ ವ್ಯಾಪ್ತಿಯ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು, ಬೋಧಕ / ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಹಾಗೂ ಎಲ್ಲಾ ವಯೋಮಾನದ ಸಾರ್ವಜನಿಕರು ಸಹ ಮನೆಯಿಂದಲೇ ಯೂಟ್ಯೂಬ್ ಚಾನಲ್‌ನ ಮುಖಾಂತರ ಭಾಗವಹಿಸಿ ದೈಹಿಕ ದೃಡತೆ ಅನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಅರಿವು ಮೂಡಿಸಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಸೂಚಿಸುತ್ತಾ ಪ್ರಾಂಶುಪಾಲರುಗಳು, ದೈಹಿಕ ಶಿಕ್ಷಣ ನಿರ್ದೇಶಕರು, ಕ್ರೀಡಾ ಸಂಚಾಲಕರು ಹಾಗೂ ಎಲ್ಲಾ ಅಧ್ಯಾಪಕರು ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಈ ಬಗ್ಗೆ ಮನವರಿಕೆ ಮಾಡಿ ಕಾರ್ಯಕ್ರಮದಲ್ಲಿ ಪ್ರತಿ ದಿನ ಎಲ್ಲರೂ ಭಾಗವಹಿಸಲು ಅಗತ್ಯ ಕ್ರಮವಹಿಸಬೇಕೆಂದು ಸೂಚಿಸಲಾಗಿದೆ.

ಮುಂದುವರೆದು, ಸದರಿ ಕಾರ್ಯಕ್ರಮದ ಮೂಲಕ ತರಬೇತಿ ನೀಡಲು ಆಸಕ್ತವಿರುವ ದೈಹಿಕ ಶಿಕ್ಷಣ ನಿರ್ದೇಶಕರು / ಅಧ್ಯಾಪಕರುಗಳು ಸಾಮಾನ್ಯ ಫಿಟ್‌ನೆಸ್ ತರಬೇತಿ, ಯೋಗ, ಆಸನ, ಪ್ರಾಣಾಯಾಮ, ನಿರ್ಧಿಷ್ಟ ದೈಹಿಕ ಕಸರತ್ತು ಉದಾ: ಹೃದಯ ಸಂಬಂಧಿ ಕಸರತ್ತು, ಏರೋಬಿಕ್ಸ್, ಜೂಂಬಾ ಫಿಟ್‌ನೆಸ್‌ಗಳ ಬಗ್ಗೆ ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ಗೂಗಲ್ ಫಾರಂ ನಲ್ಲಿ ಮಾಹಿತಿಗಳನ್ನು ಅಪ್‌ಲೋಡ್ ಮಾಡಲು ತಿಳಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ**

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:

2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ – ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು- ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಸೂಚಿಸಿದೆ.
4. ಶ್ರೀ ಮಂಜುನಾಥ್, ಸಂಚಾಲಕರು, ವಿಜಯಿ ಭವ ಯೂಟೂಬ್ ಚಾನಲ್ ಇವರಿಗೆ ಕಾರ್ಯಕ್ರಮದ ಬಗ್ಗೆ ಅಗತ್ಯ ಕ್ರಮವಹಿಸಲು.
5. ಶ್ರೀ ಶ್ರೀಕಾಂತ್ ಹಾಗೂ ಶ್ರೀ ಶ್ರೀನಿವಾಸ್ ನೋಡಲ್ ಅಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು – ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ.
6. ಕಛೇರಿ ಪ್ರತಿ.

Scanned with CamScanner